# Telephone Conversation between Prime Minister and His Majesty the King of Saudi Arabia

September 09, 2020

---

## ಪ್ರಧಾನ ಮಂತ್ರಿ ಮತ್ತು ಸೌದಿ ಅರೇಬಿಯಾದ ರಾಜರ ನಡುವಿನ ದೂರವಾಣಿ ಸಂಭಾಷಣೆ

ಸೆಪ್ಟೆಂಬರ್ 09, 2020

ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಯವರು ಸೌದಿ ಅರೇಬಿಯಾದ ರಾಜ ಸಲ್ಮಾನ್ ಬಿನ್ ಅಬ್ದುಲಜೀಜ್ ಅಲ್ ಸಾವುದ್ ರವರೊಂದಿಗೆ ಇಂದು ದೂರವಾಣಿಯಲ್ಲಿ ಮಾತನಾಡಿದರು.

COVID-19 ಸಾಂಕ್ರಾಮಿಕ ರೋಗದ ಸಂದರ್ಭದಲ್ಲಿ ಇಬ್ಬರು ನಾಯಕರು ಜಾಗತಿಕ ಸವಾಲುಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಜಿ20 ಗುಂಪಿನ ಅಧ್ಯಕ್ಷತೆಯಲ್ಲಿ ಸೌದಿ ಅರೇಬಿಯಾ ನೀಡಿದ ನಾಯಕತ್ವಕ್ಕೆ ಪ್ರಧಾನ ಮಂತ್ರಿಯವರು ಮೆಚ್ಚುಗೆ ವ್ಯಕ್ತಪಡಿಸಿದರು. ಜಿ20 ಮಟ್ಟದಲ್ಲಿ ತೆಗೆದುಕೊಂಡ ಉಪಕ್ರಮಗಳು ಸಾಂಕ್ರಾಮಿಕ ರೋಗಕ್ಕೆ ಸಂಘಟಿತ ಪ್ರತಿಕ್ರಿಯೆಯನ್ನು ಉತ್ತೇಜಿಸಲು ಸಹಾಯ ಮಾಡಿದೆ ಎಂದು ನಾಯಕರು ಒಪ್ಪಿಕೊಂಡರು. ಜಿ20 ರ ಕಾರ್ಯಸೂಚಿಯಲ್ಲಿ ಪ್ರಸ್ತುತ ಮುಖ್ಯ ಆದ್ಯತೆಗಳ ಬಗ್ಗೆಯೂ ಸಹ ಅವರು ಚರ್ಚಿಸಿದರು.

ಭಾರತ ಮತ್ತು ಸೌದಿ ಅರೇಬಿಯಾ ನಡುವಿನ ದ್ವಿಪಕ್ಷೀಯ ಸಂಬಂಧದ ಸ್ಥಿತಿಯಲ್ಲಿ ಇಬ್ಬರು ನಾಯಕರು ತೃಪ್ತಿ ವ್ಯಕ್ತಪಡಿಸಿದರು ಮತ್ತು ಎಲ್ಲಾ ಕ್ಷೇತ್ರಗಳಲ್ಲಿ ಸಹಕಾರವನ್ನು ಇನ್ನಷ್ಟು ಬಲಪಡಿಸಲು ಬದ್ಧರಾಗಿದ್ದಾರೆ. COVID-19 ಸಾಂಕ್ರಾಮಿಕ ರೋಗದ ಸಮಯದಲ್ಲಿ ಸೌದಿ ಅಧಿಕಾರಿಗಳು ಭಾರತೀಯ ವಲಸಿಗರಿಗೆ ನೀಡಿದ ಬೆಂಬಲಕ್ಕಾಗಿ ಪ್ರಧಾನ ಮಂತ್ರಿಯವರು ರಾಜ ಸಲ್ಮಾನ್ ರವರಿಗೆ ವಿಶೇಷ ಧನ್ಯವಾದಗಳನ್ನು ವ್ಯಕ್ತಪಡಿಸಿದರು.

ಸೌದಿ ಅರೇಬಿಯಾದ ರಾಜ ಸಲ್ಮಾನ್ ಬಿನ್ ಅಬ್ದುಲಾಜಿಜ್ ಅಲ್ ಸೌದ್, ರಾಜ ಕುಟುಂಬದ ಇತರ ಸದಸ್ಯರು ಮತ್ತು ರಾಜ್ಯದ ಎಲ್ಲಾ ನಾಗರಿಕರ ಆರೋಗ್ಯ ಮತ್ತು ಯೋಗಕ್ಷೇಮಕ್ಕಾಗಿ ಪ್ರಧಾನ ಮಂತ್ರಿಯವರು ತಮ್ಮ ಆತ್ಮೀಯ ಶುಭಾಶಯಗಳನ್ನು ತಿಳಿಸಿದರು.

**ನವ ದೆಹಲಿ**
**ಸೆಪ್ಟೆಂಬರ್ 09, 2020**

DISCLAIMER: This is an approximate translation. The original is available in English on MEA's website and may be referred to as the official press release.